ಕ್ರೀಡಾಂಗಣ ನಿರ್ಮಾಣ

663 (1075) ಶ್ರೀ ನರೇಂದ್ರ. ಆರ್ (ಹನೂರು) : ಮಾನ್ಯ ಜವಳಿ, ಯುವಜನ ಸೇವಾ ಮತ್ತು ಕ್ರೀಡಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಳ್ಳೇಗಾಲದ ಹನೂರು ಕ್ಷೇತ್ರದಲ್ಲಿರುವ ಕ್ರೀಡಾಂಗಣವನ್ನು ಮೂಲಭೂತ ಸೌಲಭ್ಯಗಳ ಕೊರತೆಯಿಂದಾಗಿ ಕ್ರೀಡಾಪಟುಗಳು ಉಪಯೋಗಿಸದಿರುವುದು ಸರ್ಕಾರದ ಗಮನಕ್ಕೆ ಬಂದಿರುವುದೆ;

ಆ) ಬಂದಿದ್ದಲ್ಲಿ, ಕ್ರೀಡಾಂಗಣಕ್ಕೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

ಶ್ರೀ ಗೂಳಿಹಟ್ಟಿ ಡಿ. ಶೇಖರ್ (ಜವಳಿ, ಯುವಜನ ಸೇವಾ ಮತ್ತು ಕ್ರೀಡಾ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಪಹಣಿ ನೋಂದಾವಣಿ

665 (1220) ಶ್ರೀ ನರೇಂದ್ರ ಆರ್. (ಹನೂರು) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಾಮರಾಜನಗರ ಜಿಲ್ಲೆ ಕೊಳ್ಳೇಗಾಲ ತಾಲ್ಲೂಕು, ಮಾರ್ಟಳ್ಳಿ ಗ್ರಾಮದಲ್ಲಿನ ಸರ್ವೆ ನಂ.1 ರಿಂದ 100ರ ತನಕ ಇರುವ ಜಮೀನುಗಳ ಪಹಣಿ ನೋಂದಾವಣಿಯನ್ನು ಕೈಬರಹದ ಪಹಣಿಯಿಂದ (RTC) ಗಣಕೀಕೃತ ಮಾಡುವಾಗ ಇಲಾಖೆಯವರು ಕೈಬಿಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿರುವುದೇ;

ಆ) ಬಂದಿದ್ದಲ್ಲಿ, ಸರಿಪಡಿಸಲು ತೆಗೆದುಕೊಂಡ ಕ್ರಮಗಳೇನು?

ಶ್ರೀ ಜೆ. ಕರುಣಾಕರ ರೆಡ್ಡಿ (ಕಂದಾಯ ಸಚಿವರು) :

ಅ) ಹೌದು.

ಮಾರ್ಟಳ್ಳಿ ಗ್ರಾಮದ ಸರ್ವೆ ನಂಬರ್‌ಗಳನ್ನು ಅಕಾರಬಂದ್ ಪ್ರಕಾರ ಮೂರು ಬಿಟ್‌ಗಳಾಗಿ ವಿಂಗಡಿಸಲಾಗಿದ್ದು, ಬಿಟ್ ನಂ.I ರಲ್ಲಿ ಸರ್ವೆ ನಂಬರ್ 1 ರಿಂದ 552 ಇರುತ್ತದೆ, ಬಿಟ್ ನಂ.II ರಲ್ಲಿ ಸರ್ವೆನಂಬರ್ 1 ರಿಂದ 74